## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಹುದ್ದೆಗಳಿಗೆ ಮುಂಬಡ್ತಿಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಜಸಂಇ 293 ಸೇಸಕಿ 2005, ದಿನಾಂಕ: 03.12.2014.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 75 ಸೆನೆನಿ 2010, ದಿನಾಂಕ: 19.05.2010.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೆನೆನಿ 2011, ದಿನಾಂಕ: 29.08.2011.

*******

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ:03.12.2014ರ ಸರ್ಕಾರದ ಅಧಿಸೂಚನೆಯಲ್ಲಿ ಜಲಸಂಪನ್ಮೂಲ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಿ ದಿನಾಂಕ: 11.12.2014ರಲ್ಲಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ.

2. ಮೇಲೆ (2)ರಲ್ಲಿ ಓದಲಾದ ದಿನಾಂಕ:19.05.2010ರ ಆದೇಶದಲ್ಲಿ ಆಡಳಿತ ಇಲಾಖೆಗಳು ಮುಂಬಡ್ತಿಗೆ ಸಂಬಂಧಿಸಿದಂತೆ ಜ್ಯೇಷ್ಠತೆ ಹಾಗೂ ಅರ್ಹತೆಯ ಆಧಾರದ ಮೇಲೆ ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮುಂಬಡ್ತಿಯನ್ನು ಪರಿಗಣಿಸುವಾಗ ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ.

3. ಮೇಲೆ (3)ರಲ್ಲಿ ಓದಲಾದ ದಿನಾಂಕ:29.08.2011ರ ಆದೇಶದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಮುಂಬಡ್ತಿ ನೀಡುವ ಕುರಿತಂತೆ ರಚಿಸಲಾದ ಇಲಾಖಾ ಮುಂಬಡ್ತಿ ಸಮಿತಿಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿಯನ್ನು ಸದಸ್ಯರನ್ನಾಗಿ ನೇಮಕ ಮಾಡುವಂತೆ ತಿಳಿಸಲಾಗಿದೆ.

4. ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಹುದ್ದೆಗಳಿಗೆ ಮುಂಬಡ್ತಿಗೆ ಪರಿಗಣಿಸುವ ಸಲುವಾಗಿ ಇಲಾಖಾ ಮುಂಬಡ್ತಿ ಸಮಿತಿಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮೇಲೆ ಕ್ರಮ ಸಂಖ್ಯೆ(2) ಮತ್ತು (3)ರಲ್ಲಿ ಓದಲಾಗಿರುವ ಆದೇಶಗಳಲ್ಲಿನ ಅಂಶಗಳನ್ನು ಗಣನೆಗೆ ತೆಗೆದುಕೊಂಡು ರಚಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 208 ಸೇಎಸು 2019, ಬೆಂಗಳೂರು ದಿನಾಂಕ:04.12.2019.**

5. ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯ ಸಿವಿಲ್ ಸೇವಾ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಹುದ್ದೆಗಳಿಗೆ ಮುಂಬಡ್ತಿಗಾಗಿ ಸೂಕ್ತತೆ ಹಾಗೂ ಅರ್ಹತೆಯನ್ನು ಪರಿಗಣಿಸುವ ಸಲುವಾಗಿ ಈ ಕೆಳಕಂಡಂತೆ ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಿ ಆದೇಶಿಸಿದೆ:

**ಸಮಿತಿ–1**

**I. ಗ್ರೂಪ್–ಸಿ ವೃಂದದಿಂದ ಗ್ರೂಪ್–ಬಿ ವೃಂದಕ್ಕೆ ಮುಂಬಡ್ತಿ ನೀಡಲು:-**

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ | ಅಧ್ಯಕ್ಷರು |
| 2. | ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ | ಸದಸ್ಯರು |
| 3. | ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು. | ಸದಸ್ಯರು |
| 4. | ಸರ್ಕಾರದ ಅಪರ / ಜಂಟಿ / ಉಪ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ(ಸೇವೆಗಳು) | ಸದಸ್ಯ ಕಾರ್ಯದರ್ಶಿ, ಸದಸ್ಯರು |

**ಸಮಿತಿ–2**

**II. ಗ್ರೂಪ್–ಬಿ ವೃಂದದಿಂದ ಗ್ರೂಪ್–ಎ ವೃಂದಕ್ಕೆ ಮುಂಬಡ್ತಿ ನೀಡಲು:-**

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ | ಅಧ್ಯಕ್ಷರು |
| 2. | ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ | ಸದಸ್ಯರು |
| 3. | ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ | ಸದಸ್ಯರು |
| 4. | ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು. | ಸದಸ್ಯರು |
| 5. | ಸಂಸದೀಯ ವ್ಯವಹಾರಗಳ ಇಲಾಖೆಯ ಪ್ರತಿನಿಧಿ – ಉಪ ಕಾರ್ಯದರ್ಶಿ ಹುದ್ದೆಗಿಂತ ಕಡಿಮೆ ಇಲ್ಲದ ಅಧಿಕಾರಿ | ಸದಸ್ಯರು |
| 6. | ಕರ್ನಾಟಕ ಸರ್ಕಾರ ಸಚಿವಾಲಯ ಸೇವೆಗೆ ಸೇರಿದ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡಕ್ಕೆ ಸೇರಿದ ಉಪ ಕಾರ್ಯದರ್ಶಿ ಹುದ್ದೆಗಿಂತ ಕಡಿಮೆ ಇಲ್ಲದ ಅಧಿಕಾರಿ | ಸದಸ್ಯರು |
| 7. | ಸರ್ಕಾರದ ಅಪರ / ಜಂಟಿ / ಉಪಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ(ಸೇವೆಗಳು) | ಸದಸ್ಯ ಕಾರ್ಯದರ್ಶಿ, ಸದಸ್ಯರು |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

4.12.19

(ಕೆ.ಎಲ್. ಪ್ರಸಾದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸೇವೆಗಳು–ಎ)

ಕೆ.ಎಲ್. ಪ್ರಸಾದ್
ಸರ್ಕಾರದ ಅಧೀನ ಕಾರ್ಯದರ್ಶಿ
ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ)
Ph.No : 080-2203 4738

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಈ ಆದೇಶವನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಆದೇಶದ 100 ಪ್ರತಿಗಳನ್ನು ಜಲಸಂಪನ್ಮೂಲ ಇಲಾಖೆಗೆ ಒದಗಿಸುವುದು.

**ಪ್ರತಿ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1 & 2) (ಆಡಿಟ್)
2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
3. ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಇಲಾಖೆ.
4. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ

5. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
6. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಜಲಸಂಪನ್ಮೂಲ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ (ಜಲಸಂಪನ್ಮೂಲ ಇಲಾಖೆ) ಆಪ್ತ ಕಾರ್ಯದರ್ಶಿಗಳು.
8. ಸರ್ಕಾರದ ಕಾರ್ಯದರ್ಶಿಯವರ (ಜಲಸಂಪನ್ಮೂಲ ಇಲಾಖೆ) ಆಪ್ತ ಕಾರ್ಯದರ್ಶಿಗಳು
9. ಸರ್ಕಾರದ ಉಪ ಕಾರ್ಯದರ್ಶಿಯವರ (ಸೇವೆಗಳು) (ಜಲಸಂಪನ್ಮೂಲ ಇಲಾಖೆ) ಆಪ್ತ ಸಹಾಯಕರು.
10. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು/ಜಲಸಂಪನ್ಮೂಲ ಇಲಾಖೆಯ ಅಂತರ್ಜಾಲ ತಾಣಕ್ಕೆ.